ಉತ್ತರ ಕನ್ನಡ ಜಿಲ್ಲೆಯನ್ನು ತೋಟಗಾರಿಕೆ ಜಿಲ್ಲೆಯನ್ನಾಗಿ ಮಾಡುವುದು.

1195- ಶ್ರೀ ವಿಶ್ವೇಶ್ವರ ಹೆಗ್ಗಡೆ (ಅಂಕೋಲ): ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೃಷಿ ಅಧಾರಿತ ಉತ್ತರ ಕನ್ನಡ ಜಿಲ್ಲೆಯನ್ನು ತೋಟಗಾರಿಕೆ ಜಿಲ್ಲೆ ಮಾಡುವ ಬಗ್ಗೆ ಸರ್ಕಾರದ ಉದ್ದೇಶವಿದೆಯೇ?

ಆ) ಹಾಗಿಲ್ಲದಿದ್ದಲ್ಲಿ ಇನ್ನು ಮುಂದೆಯಾದರೂ ತೋಟಗಾರಿಕೆ ಜಿಲ್ಲೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಡಿ.ಟಿ. ಜಯಕುಮಾರ್ (ತೋಟಗಾರಿಕೆ ರಾಜ್ಯ ಸಚಿವರು):

ಅ) ಇಲ್ಲ.

ಆ) ಇಲ್ಲ.

ಯಲ್ಲಾಪುರ ಬಸ್ ಡಿಪೋಗೆ ಬಡುಗಡೆಯಾದ ಹಣ

1199-ಶ್ರೀ ವಿಶ್ವೇಶ್ವರ ಹೆಗ್ಗಡೆ (ಅಂಕೋಲ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಯಾಲ್ಲಾಪುರ ಬಸ್-ಡಿಪೋ ನಿರ್ಮಾಣಕ್ಕೆ ಬಿಡುಗಡೆಯಾದ ಹಣವೆಷ್ಟು?

ಆ) ಸದರಿ ಕಾರ್ಯ ಯಾವಾಗ ಪ್ರಾರಂಭಿಸಲಾಗುತ್ತದೆ?

ಶ್ರೀ ಕೆ.ಎಸ್. ಬೀಳಗಿ (ಸಾರಿಗೆ ಸಚಿವರು):

ಅ) ಬಸ್ ಡಿಪೋ ನಿರ್ಮಾಣಕಾರ್ಯಕ್ಕಾಗಿ 30.15 ಲಕ್ಷ ರೂ.ಗಳ ಅಂದಾಜಿಗೆ ಮಂಜೂರಾತಿ ನೀಡಿ 1995-96ನೇ ಸಾಲಿನ ಆಯ ವ್ಯಯದಲ್ಲಿ 20.00 ಲಕ್ಷ ರೂ.ಗಳನ್ನು ಅಳವಡಿಸಲಾಗಿದೆ.

ಆ) ಟೆಂಡರ್ ಪ್ರಕ್ರಿಯೆಯಲ್ಲಿದ್ದು ಅಕ್ಟೋಬರ್ 1995ರಲ್ಲಿ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು.

ಉತ್ತರ ಕನ್ನಡ ಜಿಲ್ಲೆಯಲ್ಲಿ ಕೃಷಿಗೆ ಸಂಬಂಧಿಸಿದ ಹೊಸ ಸಂಶೋಧನೆ.

1203-ಶ್ರೀ ವಿಶ್ವೇಶ್ವರ ಹೆಗಡೆ (ಅಂಕೋಲ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಘಟ್ಟದ ಮೇಲೆ ಮತ್ತು ಘಟ್ಟದ ಕೆಳಗೆ ಕೃಷಿಗೆ ಸಂಬಂಧಿಸಿದಂತೆ ಹೊಸ ಸಂಶೋಧನೆ ನಡೆದಿದೆಯೇ?